671 (415) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಒಟ್ಟು ಸಾಲ ನೀಡುವಿಕೆಯಲ್ಲಿ ಶೇ 40 ಭಾಗ ರೈತರಿಗೆ ಸಾಲ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

672 (416) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) – ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೈತರು ಬೆಳೆದ ಏಕದಳ, ದ್ವಿದಳ ಬೆಳೆಗಳಿಗೆ ಬೆಲೆ ಕುಸಿದಾಗ ಬೆಂಬಲ ಬೆಲೆ ನೀಡುವ ವಿಚಾರ ಸರ್ಕಾರದ ಗಮನದಲ್ಲಿದೆಯೇ ,

ಆ) ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು) –

ಅ) ಮತ್ತು ಆ) ಕೇಂದ್ರ ಸರ್ಕಾರವು ಬೆಂಬಲ ಬೆಲೆಯನ್ನು ಘೋಷಿಸುತ್ತದೆ

ಇದರನ್ವಯ ಘೋಷಿತ ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಈ ಉತ್ಪನ್ನಗಳ ಬೆಲೆಗಳು ಕೆಳಗಿಳಿದಾಗ ಕನಿಷ್ಠ ಬೆಂಬಲ ಬೆಲೆ ಯೋಜನೆಯಲ್ಲಿ ಉತ್ಪನ್ನಗಳನ್ನು ಖರೀದಿಸುವ ವ್ಯವಸ್ಥೆ ಮಾಡಲಾಗುವುದು 2006–07ನೇ ಸಾಲಿನಲ್ಲಿ ಕೆ ಎಫ್ ಸಿ ಎಸ್ ಸಿ ಸಂಸ್ಥೆಯಿಂದ 1174 ಮೆಟ್ರಿಕ್ ಟನ್ ಭತ್ತವನ್ನು ಖರೀದಿಸಲಾಗಿದೆ ಇದರಲ್ಲಿ 'ಎ' ವರ್ಗದ ಭತ್ತದ ಪ್ರಮಾಣ 573 ಮೆಟ್ರಿಕ್ ಟನ್‌ಗಳಷ್ಟಿರುತ್ತದೆ ಹಾಗೂ 601 ಮೆ ಟನ್‌ಗಳಷ್ಟು ಸಾಮಾನ್ಯ ಶ್ರೇಣಿಯದಾಗಿರುತ್ತದೆ ಇತರೆ ಏಕದಳ ಮತ್ತು ದ್ವಿದಳ ಧಾನ್ಯಗಳಿಗೆ ಘೋಷಿತ ಬೆಂಬಲ ಬೆಲೆಗಿಂತ ಹೆಚ್ಚಿನ ಬೆಲೆಯಲ್ಲಿ ಮಾರಾಟವಾಗುತ್ತಿರುವುದರಿಂದ ಖರೀದಿ ಕಾರ್ಯನಿರ್ವಹಿಸಿರುವುದಿಲ್ಲ